# ಬೃಹತ್ ಬೆಂಗಳೂರು ಮಹಾನಗರ ಪಾಲಿಕೆ

## ಸಹಾಯಕ ಅಭಿಯಂತರರ ಕಛೇರಿ, ವಾರ್ಡ್ ಸಂಖ್ಯೆ: 164, ವಿದ್ಯಾಪೀಠ ಬೆಂಗಳೂರು.

ಸಂಖ್ಯೆ: ಸ.ಅ/ವಾ-164/ಪಿಆರ್//2021-22

ದಿನಾಂಕ: 11-06-2021

## ಜೂನ್ ಮಾಹೆಯ ವಾರ್ಡ್ ಸಮಿತಿ ಸಭೆಯ ನಡಾವಳಿಗಳು

***********

ವಿಷಯ: ಮಾನ್ಯ ಆಯುಕ್ತರು, ಬಿ.ಬಿ.ಎಂ.ಪಿ ರವರ ಕಛೇರಿ ಆದೇಶದ ಸಂಖ್ಯೆ: ಬಿ12(5)/ಪಿಆರ್/35/2020-21, ದಿನಾಂಕ: 21-09-2020ರ ಆದೇಶದಂತೆ ದಿನಾಂಕ: 12-06-2021 ರಂದು ವಾರ್ಡ್ ಸಂಖ್ಯೆ: 164, ವಿದ್ಯಾಪೀಠದಲ್ಲಿ ನಡೆದ ವಾರ್ಡ್ ಸಮಿತಿ ಸಭೆಯ ನಡವಳಿಗಳು

ಸ್ಥಳ : ಬಿಬಿಎಂಪಿ ವಾರ್ಡ್ ಕಛೇರಿ, ವಿದ್ಯಾಪೀಠ ಸರ್ಕಲ್ ಹತ್ತಿರ

ಸಮಯ : ಬೆಳಿಗ್ಗೆ 10.30 ಗಂಟೆಗೆ

**ಹಾಜರಿದ್ದ ಸದಸ್ಯರು ಮತ್ತು ಅಧಿಕಾರಿಗಳ ವಿವರ**

| ಕ್ರ.ಸಂ | ಹೆಸರು | ಪದನಾಮ |
|---|---|---|
| 1 | ಶ್ರೀ ಆರ್. ವಿಜಯ್‌ಕುಮಾರ್ | ಅಧ್ಯಕ್ಷರು ಮತ್ತು ನೋಡಲ್ ಅಧಿಕಾರಿಗಳು |
| 3 | ಶ್ರೀ ಟಿ. ಕೃಷ್ಣಮೂರ್ತಿ | ಸಹಾಯಕ ಅಭಿಯಂತರರು, ಕಾರ್ಯದರ್ಶಿ ಮತ್ತು ಸಂಚಾಲಕರು ವಾರ್ಡ್-164, ವಿದ್ಯಾಪೀಠ |
| 4 | ಶ್ರೀ ವಿಷಕಂಠಯ್ಯ ಹೆಚ್.ಎನ್ | ಕೆಲಸ ಪರಿವೀಕ್ಷಕರು, ವಾರ್ಡ್-164, ವಿದ್ಯಾಪೀಠ |
| 5 | ಶ್ರೀ ಎಂ. ಸುರೇಶ್ | ಕಂದಾಯ ವಸೂಲಿಗಾರರು |
| 6 | ಡಾ॥ ಮಧುಸೂದನ್ | ವೈದ್ಯಾಧಿಕಾರಿಗಳು |
| 7 | ಶ್ರೀ ಸುನಿಲ್ | ಹಿರಿಯ ಆರೋಗ್ಯ ಪರಿವೀಕ್ಷಕರು |
| 8 | ಶ್ರೀ ಧವಳೇಶ್ | ಸಹಾಯಕ ಅಭಿಯಂತರರು, ಬೆಸ್ಕಾಂ |
| 9 | ಜಯರಾಮೇ ಗೌಡ | ಸ್ಯಾನಿಟರಿ ಧಫೇದಾರ್ |
| 10 | ಶ್ರೀಮತಿ ಲಕ್ಷ್ಮೀ | ಕಿರಿಯ ಆರೋಗ್ಯ ಪರಿವೀಕ್ಷಕರು |
| 11 | ಶ್ರೀ ಕುಮಾರ್ | ಸಾರ್ವಜನಿಕರು |
| 12 | ಶ್ರೀ ಯೋಗೀಶ್ | ಸಾರ್ವಜನಿಕರು |

ಅಧ್ಯಕ್ಷರು ಮತ್ತು ನೋಡಲ್ ಅಧಿಕಾರಿಗಳಾದ ಶ್ರೀ ಆರ್. ವಿಜಯ್‌ಕುಮಾರ್ ರವರು ಸಭೆಯಲ್ಲಿ ಹಾಜರಿದ್ದ ಎಲ್ಲಾ ಅಧಿಕಾರಿಗಳಿಗೆ ಮತ್ತು ಸದಸ್ಯರಿಗೆ ಸ್ವಾಗತ ಕೋರುವುದರೊಂದಿಗೆ ಸಭೆಯನ್ನು ಪ್ರಾರಂಭಿಸಲಾಯಿತು. ಸಭೆಯಲ್ಲಿ ಮೇ ತಿಂಗಳ ವಾರ್ಡ್ ಸಮಿತಿ ಸಭೆಯ ನಡಾವಳಿಗಳು ಹಾಗೂ ಕೈಗೊಂಡ ಕ್ರಮಗಳ ಬಗ್ಗೆ ಸಭೆಯಲ್ಲಿ ವಾರ್ಡ್ ಅಭಿಯಂತರರು ವರದಿಯನ್ನು ಓದಿ ತಿಳಿಸಿದರು.

1. ವಾರ್ಡ್ ವ್ಯಾಪ್ತಿಯಲ್ಲಿ ಕೋವಿಡ್-19 ಹಿನ್ನೆಲೆಯಲ್ಲಿ ವಾರ್ಡ್‌ನ ಸುತ್ತಮುತ್ತಲಿನ ಪ್ರದೇಶಗಳಲ್ಲಿ ಸಂಚಾರಿ ಟೆಸ್ಟಿಂಗ್ ಸೆಂಟರ್‌ನ್ನು (ಮೊಬೈಲ್ ಯೂನಿಟ್) ಅಳವಡಿಸಿ ಹೆಚ್ಚು ಸಂಖ್ಯೆಯಲ್ಲಿ ಕೋವಿಡ್-19 ಪರೀಕ್ಷೆಗಳನ್ನು ಸಮರ್ಪಕವಾಗಿ ನಿರ್ವಹಿಸಲು ಅಧಿಕಾರಿಗಳಿಗೆ ಸೂಚಿಸಲಾಗಿರುತ್ತದೆ.

2. ವಾರ್ಡ್ ವ್ಯಾಪ್ತಿಯಲ್ಲಿ ಕೋವಿಡ್-19 ಹಿನ್ನೆಲೆಯಲ್ಲಿ ವಾರ್ಡ್‌ನ ಸುತ್ತಮುತ್ತಲಿನ ಪ್ರದೇಶಗಳಲ್ಲಿ ಸಂಚಾರಿ ಟೆಸ್ಟಿಂಗ್ ಸೆಂಟರ್‌ನ್ನು (ಮೊಬೈಲ್ ಯೂನಿಟ್) ಅಳವಡಿಸಿ ಹೆಚ್ಚು ಸಂಖ್ಯೆಯಲ್ಲಿ ಕೋವಿಡ್-19 ಪರೀಕ್ಷೆಗಳನ್ನು ಸಮರ್ಪಕವಾಗಿ ನಿರ್ವಹಿಸಲು ಅಧಿಕಾರಿಗಳಿಗೆ ಸೂಚಿಸಲಾಗಿರುತ್ತದೆ.

3. ಬೆಸ್ಕಾಂ ರವರು ವಾರ್ಡ್ ವ್ಯಾಪ್ತಿಯಲ್ಲಿ ರಸ್ತೆ ಅಗೆತ ಮಾಡಿ ಕೇಬಲ್ ಅಳವಡಿಸಿದ್ದು, ಸರಿಯಾಗಿ ರಸ್ತೆಗಳನ್ನು ಸರಿಪಡಿಸದೇ ಇರುವುದರಿಂದ ಸಾರ್ವಜನಿಕರಿಗೆ ತೊಂದರೆಯಾಗುತ್ತಿರುವುದಾಗಿ ಸಭೆಯಲ್ಲಿ ಹಾಜರಿದ್ದ ವಾರ್ಡ್ ಸದಸ್ಯರು ಮತ್ತು ಸಾರ್ವಜನಿಕರು ತಿಳಿಸಿರುತ್ತಾರೆ. ಆದುದರಿಂದ, ಬೆಸ್ಕಾಂ ವತಿಯಿಂದ ಕೈಗೊಂಡಿರುವ ಕಾಮಗಾರಿಯನ್ನು ಆದಷ್ಟು ಬೇಗ ಪೂರ್ಣಗೊಳಿಸಿ ಅಗೆದಿರುವ ರಸ್ತೆಗಳನ್ನು ಸರಿಪಡಿಸಿ ಹೆಚ್ಚುವರಿಯಾಗಿ ಸ್ಥಳದಲ್ಲೇ ಬಿಟ್ಟಿರುವ ಕೇಬಲ್‌ಗಳನ್ನು ತೆರವುಗೊಳಿಸಲು ಬೆಸ್ಕಾಂ ಅಧಿಕಾರಿಗಳಿಗೆ ಸೂಚಿಸುವಂತೆ ವಾರ್ಡ್ ಅಭಿಯಂತರರಿಗೆ ನೋಡಲ್ ಅಧಿಕಾರಿಗಳು ತಿಳಿಸಿರುತ್ತಾರೆ.

4. ವಾರ್ಡ್ ವ್ಯಾಪ್ತಿಯಲ್ಲಿ ಕೋವಿಡ್-19 ಹಿನ್ನೆಲೆಯಲ್ಲಿ ವಾರ್ಡ್‌ನ ಸುತ್ತಮುತ್ತಲಿನ ಪ್ರದೇಶಗಳಲ್ಲಿ ಮಾರ್ಷಲ್‌ಗಳು ಮಾಸ್ಕ್ ಧರಸಿದೇ ಇರುವ ಸಾರ್ವಜನಿಕರಿಗೆ ದಂಡ ವಿಧಿಸಲು ಸಭೆಯಲ್ಲಿ ಸೂಚಿಸಲಾಯಿತು.

5. ವಾರ್ಡ್-164ರ ವ್ಯಾಪ್ತಿಯಲ್ಲಿ ರಸ್ತೆಗಳು ಹಾಳಾಗಿದ್ದು, ಸದರಿ ರಸ್ತೆಗುಂಡಿಗಳು ಹೆಚ್ಚಾಗಿರುವ ಕಾರಣ ಕೂಡಲೇ ಸದರಿ ರಸ್ತೆಗುಂಡಿಗಳನ್ನು ಮುಚ್ಚಲು ಕ್ರಮವಹಿಸಬೇಕೆಂದು ಸಭೆಯಲ್ಲಿ ಹಾಜರಿದ್ದ ವಾರ್ಡ್ ಸದಸ್ಯರು ಮತ್ತು ಸಾರ್ವಜನಿಕರು ಕಾಮಗಾರಿ ವಿಭಾಗದ ವಾರ್ಡ್ ಅಭಿಯಂತರರಿಗೆ ಸೂಚಿಸಲಾಯಿತು.

6. ವಾರ್ಡ್-164ರ ವ್ಯಾಪ್ತಿಯಲ್ಲಿ ಮಳೆಯಿಂದ ಬಿದ್ದ ಮರಗಳ ರೆಂಬೆ ಕೊಂಬೆಗಳನ್ನು ಸರಿಯಾದ ಸಮಯದಲ್ಲಿ ತೆರವುಗೊಳಿಸಲಾಗಿರುತ್ತದೆ. ವಾರ್ಡ್ ನಿವಾಸಿಗಳಿಗೆ ಮಳೆಯಿಂದ ತೊಂದರೆಯಾಗದಂತೆ ಎಲ್ಲಾ ರೀತಿಯ ಸೂಕ್ತ ಕ್ರಮಗಳನ್ನು ಕೈಗೊಳ್ಳಲಾಗಿರುತ್ತದೆ.

7. ವಾರ್ಡ್-164ರ ವ್ಯಾಪ್ತಿಯಲ್ಲಿ ಮಾರ್ಷಲ್‌ಗಳು ಬ್ಲಾಕ್ ಸ್ಪಾಟ್‌ಗಳನ್ನು ಗುರುತಿಸಿ ಸದರಿ ಪ್ರದೇಶದಲ್ಲಿ ಸಾರ್ವಜನಿಕರಲ್ಲಿ ಹಸಿಕಸ ಮತ್ತು ಒಣಕಸವನ್ನು ಬೇರ್ಪಡಿಸಲು ಅರಿವು ಮೂಡಿಸುವ ಕ್ರಮಕೈಗೊಳ್ಳಬೇಕೆಂದು ಸಭೆಯಲ್ಲಿ ತಿಳಿಸಿರುತ್ತಾರೆ.

ಮೇಲಿನ ಎಲ್ಲಾ ಅಂಶಗಳಿಗೆ ಸಂಬಂಧಪಟ್ಟಂತೆ ಅಧಿಕಾರಿಗಳೊಂದಿಗೆ ಕೂಲಂಕುಶವಾಗಿ ಚರ್ಚಿಸಿದ್ದು, ಸದರಿ ವಿಷಯಗಳ ಬಗ್ಗೆ ಕ್ರಮಕೈಗೊಳ್ಳಲು ಸರ್ವಾನುಮತದಿಂದ ತೀರ್ಮಾನಿಸಿ, ವಂದನೆಗಳೊಂದಿಗೆ ಈ ಸಭೆಯನ್ನು ಮುಕ್ತಾಯಗೊಳಿಸಲಾಯಿತು.

ಕಾರ್ಯದರ್ಶಿಗಳು
ಹಾಗೂ ಸಹಾಯಕ ಅಭಿಯಂತರರು
ವಾರ್ಡ್ ಸಂಖ್ಯೆ: 164, ವಿದ್ಯಾಪೀಠ

ಅಧ್ಯಕ್ಷರು
ಹಾಗೂ ನೋಡಲ್ ಅಧಿಕಾರಿಗಳು
ವಾರ್ಡ್ ಸಂಖ್ಯೆ: 164, ವಿದ್ಯಾಪೀಠ

ಪ್ರತಿಯನ್ನು:

1. ಮಾನ್ಯ ಆಯುಕ್ತರು, ಬೃ.ಬೆ.ಮ.ಪಾಲಿಕೆ, ಎನ್. ಆರ್. ವೃತ್ತ ರವರ ಮಾಹಿತಿಗೆ ತರಲು ಆಪ್ತ ಶಾಖೆಗೆ ಕಳುಹಿಸಿದೆ.
2. ಮಾನ್ಯ ವಿಶೇಷ ಆಯುಕ್ತರು (ಆಡಳಿತ) ರವರ ಮಾಹಿತಿಗಾಗಿ ಸಲ್ಲಿಸಿದೆ.
3. ಮಾನ್ಯ ವಿಶೇಷ ಆಯುಕ್ತರು (ಆರೋಗ್ಯ & ಘ.ತ್ಯಾ.ನಿ) ರವರ ಮಾಹಿಗಾಗಿ ಸಲ್ಲಿಸಿದೆ.
4. ಮಾನ್ಯ ಉಪ ಆಯುಕ್ತರು ((ಆಡಳಿತ) ರವರ ಮಾಹಿಗಾಗಿ ಸಲ್ಲಿಸಿದೆ.
5. ಮಾನ್ಯ ಜಂಟಿ ಆಯುಕ್ತರು (ದಕ್ಷಿಣ) ರವರ ಮಾಹಿಗಾಗಿ ಸಲ್ಲಿಸಿದೆ.
6. ಮುಖ್ಯ ಅಭಿಯಂತರರು (ದಕ್ಷಿಣ) ರವರ ಅವಗಾಹನೆಗೆ ಸಲ್ಲಿಸಿದೆ.
7. ವಾರ್ಡ್ ಸಮಿತಿಯ ಅಧ್ಯಕ್ಷರ ಮಾಹಿತಿಗಾಗಿ ಕಳುಹಿಸಿದೆ.
8. ವಾರ್ಡ್ ಸಮಿತಿ ಸದಸ್ಯರ ಮಾಹಿತಿಗಾಗಿ ಕಳುಹಿಸಿದೆ.
9. ಕಚೇರಿ ಪ್ರತಿ.